ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿರುವ "ಕುಡುಬಿ" ಜನಾಂಗದವರನ್ನು ಪರಿಶಿಷ್ಟ ವರ್ಗಕ್ಕೆ ಸೇರಿಸಲು ರಾಜ್ಯ ಸರ್ಕಾರ ಕೇಂದ್ರ ಸರ್ಕಾರಕ್ಕೆ ಶಿಫಾರಸ್ಸು ಮಾಡಿದೆಯೇ?

ಆ) ಮೇಲ್ಕಂಡ ಜನಾಂಗದವರು ಅತ್ಯಂತ ಹಿಂದುಳಿದ ಸ್ಥಿತಿಯಲ್ಲಿದ್ದು ಈ ಜನಾಂಗದ ಶೈಕ್ಷಣಿಕ, ಸಾಮಾಜಿಕ, ಆರ್ಥಿಕ ಉನ್ನತಿಗಾಗಿ ಸರ್ಕಾರ ಕೈಗೊಡ ಕ್ರಮಗಳೇನು?

ಶ್ರೀ ಧರ್ಮಸಿಂಗ್ (ಸಮಾಜ ಕಲ್ಯಾಣ ಮತ್ತು ಕಂದಾಯ ಸಚಿವರು):

ಅ) ಇಲ್ಲ.

ಆ) ಸರ್ಕಾರಿ ಆದೇಶ ಸಂಖ್ಯೆ ಎಸ್‌ಡಬ್ಲ್ಯೂ ಎಲ್ 66 ಬಿಸಿಎ 86 ದಿ: 13-10-86 ರನ್ವಯ ಕುಡುಬಿ ಜನಾಂಗವನ್ನು 'ಬಿ' ಗುಂಪಿನಡಿ ಸೇರಿಸಿದ್ದು ಈ ಜನಾಂಗದವರಿಗೆ ವಾರ್ಷಿಕ ಆದಾಯ ರೂ 10000ಗಳ ಮಿತಿಯೊಳಗೆ ಶೈಕ್ಷಣಿಕ ಸಾಮಾಜಿಕ ಹಾಗೂ ಆರ್ಥಿಕ ಸೌಲಭ್ಯಗಳನ್ನು ಕೆಳಗಿನ ಯೋಜನೆಗಳ ಮೂಲಕ ಒದಗಿಸಲಾಗುವುದು.

1. ಕಾನೂನು ಪದವೀಧರರಿಗೆ ತರಬೇತಿ
2. .ಹಿಂದುಳಿದ ವರ್ಗಗಳ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ನವೋದಯ ಮಾದರಿಯಲ್ಲಿ ವಸತಿ ಶಾಲೆ ಸೌಲಭ್ಯ
3. ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳು
4. ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳು
5. ಶುಲ್ಕ ವಿನಾಯಿತಿ ಸೌಲಭ್ಯ
6. ಬೆರಳಚ್ಚು ಮತ್ತು ಶೀಘ್ರಲಿಪಿ ತರಬೇತಿ ಭತ್ಯೆ ನೀಡಿಕೆ.
7. ಮೆಟ್ರಿಕ್ ಪೂರ್ವ ಬಾಲಕ:ಬಾಲಕಿಯರ ವಿದ್ಯಾರ್ಥಿ ನಿಲಯಗಳು
8. ಖಾಸಗಿ : ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳಿಗೆ ಅನುದಾನ
9. ವಿದ್ಯಾರ್ಥಿನಿಲಯಗಳಲ್ಲಿರುವವರಿಗೆ ಪ್ರೋತ್ಸಾಹಗಳು
10. ಹೊಲಿಗೆ ತರಬೇತಿ ಕೇಂದ್ರಗಳ ನಿರ್ವಹಣೆ
11. ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿಗಳಿಗೆ ಆಟದ ಸಾಮಗ್ರಿಗಳ ಪೂರೈಕೆ
12. ಮಹಿಳಾ ಕಲ್ಯಾಣ ಕೇಂದ್ರಗಳು
13. ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳು

ಕರ್ನಾಟಕ ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ಕಾರ್ಯಕ್ರಮಗಳ ಮೂಲಕ

1. ಬಂಡವಾಳ ಹೂಡಿಕೆ : ಅಲ್ಪ ಹಣಕಾಸಿನ ಸಾಲಯೋಜನೆ
2. ಸ್ವಯಂ ಉದ್ಯೋಗಕ್ಕಾಗಿ ತರಬೇತಿ
3. ಡಿಪ್ಲೊಮೊ ವಿದ್ಯಾರ್ಥಿಗಳಿಗೆ ಪೋರ್‌ಮನ್‌ಶಿಪ್‌ನಲ್ಲಿ ತರಬೇತಿ
4. ವೃತ್ತಿ ಸಂಬಂಧ ತರಬೇತಿ ಕಾರ್ಯಕ್ರಮಗಳು

ಹುಕ್ಕೇರಿ ಪಟ್ಟಣಕ್ಕೆ ನೀರು ಪೂರೈಕೆ

481 - ಶ್ರೀ ಉಮೇಶ್ ವಿ. ಕತ್ತಿ (ಹುಕ್ಕೇರಿ): ಮಾನ್ಯ ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹುಕ್ಕೇರಿ ಪಟ್ಟಣಕ್ಕೆ ಯೋಜಿಸಲಾಗಿರುವ ಕೊಟಬಾಗಿ ನೀರು ಪೂರೈಕೆ ಯೋಜನೆ ಕಾರ್ಯ ಪೂರ್ಣಗೊಂಡಿದೆಯೇ ಹಾಗೂ ಶುದ್ಧ ನೀರು ಒದಗಿಸಲಾಗುತ್ತಿದೆಯೇ?

ಆ) ಅಲ್ಲಿ ನೀರು ಫಿಲ್ಟರೇಶನ್ ಟ್ಯಾಂಕ್ ನಿರ್ಮಿಸಲಾಗಿದೆಯೇ?

ಇ) ಇಲ್ಲವಾದಲ್ಲಿ ಅದನ್ನು ಯಾವಾಗ ನಿರ್ಮಿಸಲಾಗುತ್ತದೆ?

ಶ್ರೀ ಚೌಡರೆಡ್ಡಿ (ನಗರಾಭಿವೃದ್ಧಿ ಸಚಿವರು):

ಅ) ಜಲ ಶುದ್ಧೀಕರಣಗಾರಕ್ಕೆ ಸಂಬಂಧಪಟ್ಟ ಕಾಮಗಾರಿಗಳನ್ನು ಹೊರತುಪಡಿಸಿ ಹುಕ್ಕೇರಿ ಪಟ್ಟಣಕ್ಕೆ ದಿ: 16-12-92ರಿಂದ ಕೊಟಾಬಾಗಿ ನೀರು ಪೂರೈಕೆ ಯೋಜನೆಯನ್ನು ಕಾರ್ಯಗತಗೊಳಿಸಲಾಗದೆ. ಹಾಗೂ ದಿ: 29-12-92 ರಿಂದ ಕ್ಲೋರಿನ್‌ಯುಕ್ತ ನೀರನ್ನು ಸರಬರಾಜು ಮಾಡಲಾಗುತ್ತಿದೆ

ಆ) ನೀರನ್ನು ಶುದ್ಧಪಡಿಸಲು ಸೆಟ್ಲಿಂಗ್ ಟ್ಯಾಂಕ್ ಹಾಗೂ ಸಂಬಂಧಪಟ್ಟ ಸಿವಿಲ್ ಕಾಮಗಾರಿಗಳು ಮುಗಿದಿದ್ದು ಅವುಗಳಿಗೆ ಯಂತ್ರೋಪಕರಣಗಳ ಪೂರೈಕೆ ಹಾಗೂ ಜೋಡಣೆ ಕಾರ್ಯ ಪ್ರಗತಿಯಲ್ಲಿವೆ.

ಇ) ಸೆಟ್ಲಿಂಗ್ ಟ್ಯಾಂಕ್ ಮತ್ತು ಸಂಬಂಧಪಟ್ಟ ಕಾಮಗಾರಿಗಳನ್ನು ಮೇ 1994ರ ಅಂತ್ಯದ ಒಳಗೆ ಮುಗಿಸಿ ಶುದ್ಧ ನೀರು ಸರಬರಾಜು ಮಾಡಲಾಗುವುದು.

ಹುಕ್ಕೇರಿ ಪುರಸಭೆಗೆ ಸರ್ಕಾರದ ವಿಶೇಷ ಅಭಿವೃದ್ಧಿ ಅನುದಾನ ಬಿಡುಗಡೆ

480 - ಶ್ರೀ ಉಮೇಶ್ ವಿ. ಕತ್ತಿ (ಹುಕ್ಕೇರಿ) : ಮಾನ್ಯ ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹುಕ್ಕೇರಿ ಪುರಸಭೆಗೆ ಸರ್ಕಾರ ವಿಶೇಷ ಅಭಿವೃದ್ಧಿ ಅನುದಾನ ಬಿಡುಗಡೆ ಮಾಡಿದೆಯೇ?

ಆ) ಇಲ್ಲದಿದ್ದಲ್ಲಿ, ಅದಕ್ಕೆ ಕಾರಣವೇನು? ಮತ್ತು ಯಾವಾಗ ಎಷ್ಟು ಹಣ ಬಿಡುಗಡೆ ಮಾಡಲಾಗುತ್ತದೆ?

ಶ್ರೀ ಚೌಡರೆಡ್ಡಿ (ನಗರಾಭಿವೃದ್ಧಿ ಸಚಿವರು):

ಅ) ಇಲ್ಲ.

ಆ) ರೂ. 250.00 ಲಕ್ಷಗಳನ್ನು ಬಿಡುಗಡೆ ಮಾಡಿ, ಮುಗಿದುಹೋಗಿರುವುದರಿಂದ ಕೊಡಲಾಗಿಲ್ಲ. ಹೆಚ್ಚುವರಿ ಹಣ ಬಿಡುಗಡೆ ಆದಲ್ಲಿ ಮುಂದಿನ ಕ್ರಮ ಕೈಗೊಳ್ಳಲಾಗುವುದು.

ಹುಕ್ಕೇರಿ ತಾಲ್ಲೂಕಿನಲ್ಲಿ (ಸಿಡಿಪಿ) ಬಾಲವಿಕಾಸ ಯೋಜನೆಯಡಿಯಲ್ಲಿ ಅಂಗನವಾಡಿ ಶಿಕ್ಷಕಿಯರ ನೇಮಕಾತಿ

479 - ಶ್ರೀ ಉಮೇಶ್ ವಿ. ಕತ್ತಿ (ಹುಕ್ಕೇರಿ) : ಮಾನ್ಯ ಸಮಾಜ ಕಲ್ಯಾಣ ಮತ್ತು ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹುಕ್ಕೇರಿ ತಾಲ್ಲೂಕಿನ (ಸಿಡಿಪಿ) ಬಾಲ ವಿಕಾಸ ಯೋಜನೆಯಡಿಯಲ್ಲಿ ಅಂಗನವಾಡಿ ಶಿಕ್ಷಕಿಯರನ್ನು ಶಾಸಕರ ಸಮಿತಿ ಗಮನಕ್ಕೆ ಬರದೆ ನೇಮಕ ಮಾಡಿಕೊಂಡ ಆಭ್ಯರ್ಥಿಗಳಿಷ್ಟು?

ಆ) ಅಂತಹ ಪ್ರಕರಣಗಳಲ್ಲಿ ಸಂಬಂಧಿಸಿದ ಅಧಿಕಾರಿಯ ಮೇಲೆ ಕ್ರಮ ಕೈಕೊಳ್ಳಲಾಗುವುದೇ?

ಶ್ರೀ ಧರ್ಮಸಿಂಗ್ (ಸಮಾಜ ಕಲ್ಯಾಣ ಮತ್ತು ಕಂದಾಯ ಸಚಿವರು):

ಅ) ಸರ್ಕಾರದ ಗಮನಕ್ಕೆ ಬಂದಿಲ್ಲ, ಸರ್ಕಾರವು ರಚಿಸಿದ ಅಂಗನವಾಡಿ ಕಾರ್ಯಕರ್ತೆಯರ ಆಯ್ಕೆ ಸಮಿತಿಯಲ್ಲಿ 1991 ಮತ್ತು 1993ರಲ್ಲಿ ಆಯ್ಕೆ ಮಾಡುವಾಗ,